ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ

ದಿನಾಂಕ : DATE : 21/06/2019

# 2022ರ ವೇಳೆಗೆ ನವ ಭಾರತ ನಿರ್ಮಾಣ ಗುರಿ

## ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿ ಭಾಷಣ | ಕೇಂದ್ರದ ಮಹತ್ವದ ಯೋಜನೆ ಅನಾವರಣ

ಕ.ಪ್ರ 21/6/19



ನವದೆಹಲಿ: ನವ ಭಾರತ ನಿರ್ಮಾಣದ ಗುರಿ, ಏಕಕಾಲಕ್ಕೆ ಚುನಾವಣೆ ಸೇರಿ ಪ್ರಧಾನಿ ನರೇಂದ್ರ ಮೋದಿ ಅವರ 2ನೇ ಅವಧಿಯ ಸರ್ಕಾರದ ಮಾರ್ಗಸೂಚಿಯನ್ನು ರಾಷ್ಟ್ರಪತಿ ರಾಮನಾಥ್ ಕೋವಿಂದ್ ಗುರುವಾರ ತೆರೆದಿಟ್ಟಿದ್ದಾರೆ.

ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಿದ ಅವರು, ಸರ್ಕಾರದ ಸಾಧನೆಗಳನ್ನು ಮತ್ತು ಆದ್ಯತೆಗಳನ್ನು ವಿವರಿಸಿದರು. ಪ್ರತಿಯೊಬ್ಬರನ್ನೂ ಸಬಲೀಕರಣಗೊಳಿಸಿ, 2022ರ ವೇಳೆಗೆ 'ನವ ಭಾರತ'ದ ನಿರ್ಮಾಣ ಸರ್ಕಾರದ ಪ್ರಮುಖ ಗುರಿಯಾಗಿದೆ. ಸದೃಢ, ಭದ್ರ ಮತ್ತು ಎಲ್ಲರನ್ನೂ ಒಳಗೊಂಡ ಭಾರತವನ್ನು ನಿರ್ಮಿಸುವತ್ತ ಸರ್ಕಾರ ಕಾರ್ಯಪ್ರವೃತ್ತವಾಗಿದೆ. ದೇಶದ ಪ್ರಗತಿ ಮತ್ತು ಉದ್ಯೋಗ ಸೃಷ್ಟಿಯ ಗುರಿಯೊಂದಿಗೆ ನೂತನ ಕೈಗಾರಿಕಾ ನೀತಿಯನ್ನು ಸರ್ಕಾರ ಶೀಘ್ರದಲ್ಲೇ ಪ್ರಕಟಿಸಲಿದೆ ಎಂದು ಹೇಳಿದರು.

ಪದೇ ಪದೇ ಚುನಾವಣೆಗಳು ನಡೆಯುವುದರಿಂದ ಅಭಿವೃದ್ಧಿಗೆ ಅಡ್ಡಿಯಾಗುತ್ತಿದೆ ಎಂದರು. ಏಕ ಕಾಲಕ್ಕೆ ಚುನಾವಣೆ ನಡೆಸುವ ಬಗ್ಗೆ ಸಂಸದರು ಗಂಭೀರವಾಗಿ ಪರಿಗಣಿಸಬೇಕು ಎಂದು ಹೇಳಿದರು.

## ಕೋವಿಂದ್ ಭಾಷಣದ ವೇಳೆ ಮೊಬೈಲಲ್ಲಿ ರಾಹುಲ್ ಬ್ಯುಸಿ



ನವದೆಹಲಿ: ಇತ್ತೀಚೆಗಷ್ಟೇ ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ನೋಂದಣಿ ಪುಸ್ತಕದಲ್ಲಿ ಸಹಿ ಹಾಕದೆ ತೆರಳುವ ಮೂಲಕ ಎಡವಟ್ಟು ಮಾಡಿಕೊಂಡಿದ್ದ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಅವರು, ಇದೀಗ ಮಹತ್ವದ ರಾಷ್ಟ್ರಪತಿ ಭಾಷಣದ ಬಗ್ಗೆಯೇ ನಿರ್ಲಕ್ಷ್ಯತೆ ವಹಿಸಿ ಅಗೌರವ ತೋರಿದ್ದಾರೆ. ಗುರುವಾರ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಭಾಷಣ ಮಾಡುತ್ತಿದ್ದರು. ಈ ವೇಳೆ ರಾಹುಲ್, ತಮ್ಮ ಮೊಬೈಲ್ ವೀಕ್ಷಿಸುತ್ತಿದ್ದರು.

## ರಾಷ್ಟ್ರಪತಿ ಭಾಷಣ ವೇಳೆ ಡಿಎಂಕೆ 'ಕಾವೇರಿ' ಗದ್ದಲ

ನವದೆಹಲಿ: ರಾಷ್ಟ್ರಪತಿ ಕೋವಿಂದ್ ಭಾಷಣದ ವೇಳೆ ತಮಿಳುನಾಡಿನ ಡಿಎಂಕೆ ಸಂಸದರು ಕಾವೇರಿ ನದಿ ನೀರು ಹಂಚಿಕೆ ವಿಷಯದ ಬಗ್ಗೆ ಘೋಷಣೆ ಕೂಗಿದ ಘಟನೆ ನಡೆಯಿತು. ಕರ್ನಾಟಕ ಮತ್ತು ತಮಿಳುನಾಡು ಮಧ್ಯದಲ್ಲಿನ ಕಾವೇರಿ ನದಿ ನೀರಿನ ಹಂಚಿಕೆ ವಿಷಯ ಕುರಿತ ಘೋಷಣಾಪತ್ರಗಳನ್ನು ಪ್ರದರ್ಶಿಸಿ, ವಿವಾದ ಇತ್ಯರ್ಥಕ್ಕೆ ಆಗ್ರಹಿಸಿದರು.